ಈ) ಹಾಗಿದ್ದರೆ, ಕ್ಷೇತ್ರ ಶಿಕ್ಷಣಾಧಿಕಾರಿಯವರು ಕ್ಷೇತ್ರದ ಶಾಸಕರಿಗೆ ವಿವರ ನೀಡಬಾರದು ಎಂಬ ನಿಯಮವಿದೆಯೇ;

ಉ) ಕ್ಷೇತ್ರ ಶಿಕ್ಷಣಾಧಿಕಾರಿಯವರ ಈ ರೀತಿಯ ನಿರಾಸಕ್ತಿಗೆ ಯಾವ ಕ್ರಮ ಕೈಗೊಳ್ಳಲಾಗುವುದು;

ಊ) ಶಾಸಕರಿಗೆ ವಿವರಗಳನ್ನು ನೀಡುವ ಬಗ್ಗೆ ಸರ್ಕಾರದಿಂದ ಸೂಕ್ತ ಸುತ್ತೋಲೆ, ನೀಡಲಾಗುವುದೇ; ವಿವರ ನೀಡುವುದು;

ಶ್ರೀ ಆರ್. ರಾಮಲಿಂಗಾರೆಡ್ಡಿ. (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಕಾರ್ಕಳ ತಾಲ್ಲೂಕಿನಲ್ಲಿ ಒಟ್ಟು, 85 ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಹಾಗೂ 92 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿವೆ.

ಆ) ಒಟ್ಟು ಎಲ್ಲಾ ಸರ್ಕಾರಿ ಹಿರಿಯ ಹಾಗೂ ಕಿರಿಯ ಪ್ರಾಥಮಿಕ. ಶಾಲೆಗಳಲ್ಲಿ ಮಂಜೂರಾಗಿರುವ ಹುದ್ದೆಗಳು – 656

ಭರ್ತಿಯಾದ ಹುದ್ದೆಗಳು 584

ಖಾಲಿ ಇರುವ ಹುದ್ದೆಗಳು 72

ಇ) ಹೌದು.

ಈ) ಶಾಸಕರುಗಳಿಂದ ಬಂದ ಪತ್ರಗಳಿಗೆ ಕೂಡಲೇ ಸ್ವೀಕೃತಿ ನೀಡಿ, ತಕ್ಷಣ ಉತ್ತರ ನೀಡಬೇಕೆಂದು ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ದಿನಾಂಕ 20031998 ಹಾಗೂ 1032000 ಸರ್ಕಾರದ ಸುತ್ತೋಲೆಗಳಲ್ಲಿ ಸೂಚಿಸಲಾಗಿರುತ್ತದೆ. ಈ ಕ್ರಮವನ್ನು ಕಡ್ಡಾಯವಾಗಿ ಪಾಲಿಸುವಂತೆ ನಿರ್ದೇಶಿಸಲಾಗಿರುತ್ತದೆ.

ಅಲ್ಲದೇ ಕೂಡಲೇ ದೊರೆಯುವ ಮತ್ತು ರಹಸ್ಯವಲ್ಲದ ಸ್ಥಳೀಯ ಮಹತ್ವದ ವಿಷಯಗಳಿಗೆ ಮಾಹಿತಿ ಮತ್ತು ಅಂಕಿಅಂಶಗಳನ್ನು ಕೋರಿದಾಗ ವಿವರಗಳನ್ನು ಒದಗಿಸಬೇಕಲ್ಲದೆ, ಸಂದೇಹಾಸ್ಪದ ಸಂದರ್ಭಗಳಲ್ಲಿ ಕೋರಿಕೆಯನ್ನು ತಿರಸ್ಕರಿಸುವ ಮೊದಲು ಉನ್ನತ ಅಧಿಕಾರಿಗಳಿಂದ ನಿರ್ದೇಶನ ಪಡೆಯುವಂತೆ ಕೂಡಾ ಸೂಚಿಸಲಾಗಿರುತ್ತದೆ.

ಉ) ಕ್ಷೇತ್ರ ಶಿಕ್ಷಣಾಧಿಕಾರಿಯು ಮೇಲಿನ ಸರ್ಕಾರದ ಸುತ್ತೋಲೆಗಳಲ್ಲಿನ ಸೂಚನೆಗಳನ್ನು ಪಾಲಿಸಿಲ್ಲವೆಂಬುದರ ಬಗ್ಗೆ ಪರಿಶೀಲಿಸಿ ನಿಯಮಾನುಸಾರ ಸೂಕ್ತಕ್ರಮವನ್ನು ಜರುಗಿಸಲಾಗುವುದು.

ಊ) ಈ ಕುರಿತಂತೆ ಈಗಾಗಲೇ ದಿನಾಂಕ:20.03.1998 ಮತ್ತು 1.3.2000 ಸರ್ಕಾರದ ಸುತ್ತೋಲೆಗಳು ಜಾರಿಯಲ್ಲಿರುತ್ತವೆ.

5803 (6485) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲಾ ಕೇಂದ್ರವಾಗಿ ಮಾರ್ಪಾಟು ಆಗಿರುವುದರಿಂದ ಒಂದು ಉಪನಗರ ನಿರ್ಮಾಣಕ್ಕೆ ಸರ್ಕಾರ ಕ್ರಮ ಕೈಗೊಂಡಿದೆಯೇ;

ಆ) ಉಪನಗರ ನಿರ್ಮಾಣಕ್ಕೆ ಸರ್ಕಾರಕ್ಕೆ ಬೇಕಾಗಿರುವ ಸವಲತ್ತುಗಳೇನು;

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಅಂತಹ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

5804 (6495) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕುಷ್ಠರೋಗ ನಿರ್ಮೂಲನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಆ) ಯಾವ ಯಾವ ರೀತಿಯ ರೋಗಗಳು ಕಾಣಿಸಿಕೊಳ್ಳುತ್ತಿವೆ;

ಇ) ಈ ರೋಗಗಳ ಬಗ್ಗೆ ತಿಳುವಳಿಕೆ ಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಜನ ಸಾಮಾನ್ಯರಿಗೆ ಕುಷ್ಠರೋಗದ ಬಗ್ಗೆ ಮಾಹಿತಿ ಶಿಕ್ಷಣ ಸಂಪರ್ಕದ ಮೂಲಕ ಮತ್ತು ಒಬ್ಬರಿಗೊಬ್ಬರಿಗೆ ರೋಗದ ಬಗ್ಗೆ ಅರಿವು ಮೂಡಿಸಿ ರೋಗ ಲಕ್ಷಣ ಕಂಡಲ್ಲಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರ ಭೇಟಿ ನೀಡಿ, ವೈದ್ಯರಿಂದ ಪರೀಕ್ಷಿಸಿಕೊಂಡು ಕುಷ್ಠರೋಗವೆಂದು ಧೃಡಪಟ್ಟಾಗ ಬಹುವಿಧ ಔಷಧಿ ಚಿಕಿತ್ಸೆಯನ್ನು ಉಚಿತವಾಗಿ ನೀಡಲಾಗುತ್ತಿದೆ.

ಆ) ದೇಹದ ಯಾವುದೇ ಭಾಗದ ಮೇಲೆ ಸ್ಪರ್ಶಜ್ಞಾನವಿಲ್ಲದ ತಿಳಿ ಅಥವಾ ತಾಮ್ರ ವರ್ಣದ ಮಚ್ಚೆಗಳು ಕಾಣಿಸಿಕೊಳ್ಳುತ್ತವೆ.

ಇ) ಜನ ಸಾಮಾನ್ಯರಿಗೆ ಕುಷ್ಠರೋಗದ ನಿರ್ಮೂಲನೆ ಬಗ್ಗೆ ಅರಿವು ಮೂಡಿಸಲು, 1998ರಿಂದ 2002ನೇ ಇಸವಿಯವರೆಗೆ 4 ಮಾರ್ಪಾಡಿತ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ರಸ್ತೆ ಸಂಪರ್ಕವಿಲ್ಲದ ಹಳ್ಳಿಗಳಿಗೆ ಸ್ಯಾಪೆಲ್ ಎಂಬ ಕಾರ್ಯಕ್ರಮವನ್ನು ಹಾಗೂ ನಗರ ಪ್ರದೇಶಗಳಲ್ಲಿ 1 ಲಕ್ಷ ಜನಸಂಖ್ಯೆಯಿರುವ ಕೊಳಚೆ ಪ್ರದೇಶಗಳಲ್ಲಿ ಲೆಕ್ ಎಂಬ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಇದರ ಜೊತೆಗೆ 15 ವೈದ್ಯಕೀಯ ಕಾಲೇಜುಗಳಲ್ಲಿ ಕುಷ್ಠರೋಗದ ಬಗ್ಗೆ ಮುಂದುವರೆದ ವೈದ್ಯಕೀಯ ಶಿಕ್ಷಣ ನೀಡಲಾಗಿದೆ, ಹಾಗೂ ಭಾರತೀಯ ವೈದ್ಯ ಪದ್ಧತಿಯ ವೈದ್ಯಕೀಯ ಕಾಲೇಜುಗಳಲ್ಲಿ ಸದ್ಯದಲ್ಲಿ ಹಮ್ಮಿಕೊಳ್ಳಲಾಗುವುದು, ದೂರದರ್ಶನ, ಆಕಾಶವಾಣಿ, ಕೇಬಲ್ ಟಿವಿ, ಪತ್ರಿಕೆಗಳು, ಗೋಡೆ ಬರಹ, ಪ್ರಕಟಣಾ ಫಲಕಗಳು ಮತ್ತು ಬಸ್ಸಿನ ಹೊರಭಾಗದಲ್ಲಿ ಕುಷ್ಠರೋಗದ ಮಾಹಿತಿಗಳನ್ನು ಪ್ರಕಟಿಸಲಾಗಿದೆ. ಸಿನಿಮಾ ಸ್ಲೈಡ್ಸ್ ವೀಡಿಯೋ ಚಿತ್ರೀಕರಣ, ಕರಪತ್ರ ಮತ್ತು ವಿವಿಧ ಧರ್ಮ ಗುರುಗಳಿಂದ ಕುಷ್ಠರೋಗದ ಬಗ್ಗೆ ಸಂದೇಶಗಳನ್ನು ತಯಾರಿಸಿ ಪ್ರಕಟಿಸಲಾಯಿತು. ಜಾತ್ರೆಗಳಲ್ಲಿ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಲು ವಸ್ತು ಪ್ರದರ್ಶನ ಕೈಗೊಳ್ಳಲಾಗಿದೆ. ಇಷ್ಟೇ ಅಲ್ಲದೆ, ಆರೋಗ್ಯ ಇಲಾಖೆಯ ವೈದ್ಯರುಗಳಿಗೆ ಹಾಗೂ ಸಿಬ್ಬಂದಿ ವರ್ಗದವರಿಗೆ ಇತ್ತೀಚಿನ ಆಧುನಿಕ ತರಬೇತಿಯನ್ನು ನೀಡಲಾಗಿದೆ. ಇದರ ಜೊತೆಗೆ ಶಾಲೆಯ ಉಪಾಧ್ಯಾಯರು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಪಂಚಾಯತ್ ಸದಸ್ಯರು, ಜಿಲ್ಲಾ ಪಂಚಾಯಿತಿಯ ಸದಸ್ಯರಿಗೆ ಕುಷ್ಠರೋಗದ ಬಗ್ಗೆ ತರಬೇತಿಯನ್ನು ನೀಡಲಾಗುತ್ತಿದೆ. ಭಾರತ ಸರ್ಕಾರದ ಸಂಗೀತ ಮತ್ತು ನಾಟಕ ವಿಭಾಗದವತಿಯಿಂದ ಜಾನಪದ ಕಲೆಯ ಮೂಲಕ ಜನ ಸಾಮಾನ್ಯರಲ್ಲಿ ಕುಷ್ಠರೋಗದ ಬಗ್ಗೆ, ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ. ಇದರ ಜೊತೆಗೆ 27 ನಗರ